Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಪುಲಕೇಶಿನಗರ ಉಪ ವಿಭಾಗ, ವಾರ್ಡ್ ನಂ.61(ಎಸ್.ಕೆ ಗಾರ್ಡೆನ್)
## ವಾರ್ಡ್ ಸಮಿತಿ ಸಭೆ, ದಿನಾಂಕ:03-07-2021 ರ ಸಭಾ ನಡವಳಿ

**ಸಂಖ್ಯೆ:** ಸ.ಕಾನಿ.ಅ (ಪು.ನ)/ಪಿಆರ್/ 21 /2021-22

ದಿನಾಂಕ: 03-07-2021 ರಂದು ಮದ್ಯಾಹ್ನ 12.00 ಗಂಟೆಗೆ ವಾರ್ಡ್ ನಂ. 61-ಎಸ್.ಕೆ ಗಾರ್ಡೆನ್ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಾಯಕ ಅಭಿಯಂತರರು ರವರ ವಾರ್ಡ್ ಕಛೇರಿ ಐ.ಟಿ.ಐ ಲೇಔಟ್ ಎಸ್.ಕೆ ಗಾರ್ಡನ್ ವಾರ್ಡ್ ಸಂಖ್ಯೆ 61 ರಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 12 | Atif Ahmed | Nodal Officer ward No. 61-S.K Garden & Asst. Executive Engineer, Hebbal Sub-division |
| 13 | Ravi waddar | Assistant Executive Engineer Pulakeshi Nagar Sub Division |
| 14 | Dr. Zaiba | Medical Officer |
| 15 | Venkatesh | Senior Health Inspector |
| 16 | Harish | JHI Ward No 61 |
| 17 | Srinivas | Senior Vetenary Inspector |
| 18 | Smt: M. Meena | Welfare Tailoring Teacher |
| 19 | Ragavendra N | Tax Inspector |
| 20 | Manohar | JE Bescom |
| 21 | Anand | JE Bescom |
| 22 | Narasimhaiah | BWSSB |

**ಶ್ರೀ ಅತೀಫ್ ಅಹಮ್ಮದ್**, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಹೆಬ್ಬಾಳ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (**ನೋಡಲ್ ಅಧಿಕಾರಿ**) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡಾ ವಿಷಯಗಳ ಬಗ್ಗೆ ತಿಳಿಸಿದರು.

- ದಿನಾಂಕ : 26-06-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.
- **ಕಾಮಗಾರಿ ಇಲಾಖೆ.**
  1. ಗೋವಾ ಗಾರ್ಡನ್ ಮತ್ತು ಡಿ.ಜೆ ಹಳ್ಳಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಸೂಚಿಸಲಾಯಿತು.
  2. ವಿಲಿಯಮ್ಸ್ ಟೌನ್ ಪಾರ್ಕ್‌ನ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಡೆಬ್ರಿಸ್‌ಗಳನ್ನು ತೆರವುಗೊಳಿಸಲು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ ಸೂಚಿಸಲಾಯಿತು
  3. 6ನೇ ಮುಖ್ಯರಸ್ತೆ ಐ.ಟಿ.ಐ ಲೇಔಟ್‌ನಲ್ಲಿ ಮಿಸ್ಸಿಂಗ್ ಸ್ಲಾಬ್‌ಗಳನ್ನು ಹಾಕಲು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ ಸೂಚಿಸಲಾಯಿತು.
  4. ಪಾರ್ಕ್‌ನ ಸಿ.ಸಿ ಕ್ಯಾಮೆರಾಗಳನ್ನು ಅಳವಡಿಸಲು ಸಹಾಯಕ ಕಾರ್ಯನಿರ್ವಾಹಕ ಅಬಿಯಂತರರಿಗೆ ಸೂಚಿಸಲಾಯಿತು.

- **ಘನತ್ಯಾಜ್ಯ ನಿರ್ವಹಣೆ ಕೋಶದ ಅಧಿಕಾರಿಗಳಿಗೆ:**
  1. ವಾರ್ಡ್‌ನ ಬ್ಲಾಕ್‌ಸ್ಪಾಟ್‌ಗಳನ್ನು ಸ್ವಚ್ಛಗೊಳಿಸಿ ತೆರವುಗೊಳಿಸುವಂತೆ ಸಂಬಂಧಪಟ್ಟ ಘನತ್ಯಾಜ್ಯ ನಿರ್ವಹಣಾ ಸಹಾಯಕ ಕಾರ್ಯಪಾಲಕ ಅಭಿಯಂತರರು/ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.
  2. ಪ್ರತಿ ದಿನ ವಾರ್ಡ್ ಪ್ರದೇಶದಲ್ಲಿ ಉತ್ಪತ್ತಿಯಾಗುವ ತ್ಯಾಜ್ಯ ವಿಲೇವಾರಿ ಅಭಿವೃದ್ಧಿ ಮಾಡುವಂತೆ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.
  3. ರಸ್ತೆ ಬದಿಯಲ್ಲಿ ಕಸ ಹಾಕುವವರಿಗೆ ದಂಡ ವಿಧಿಸಲು ಸೂಚಿಸಲಾಯಿತು.

- **ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಿಗೆ:**
  1. ವಾರ್ಡ್ ಪ್ರದೇಶ ಸಾರ್ವಜನಿಕರಿಗೆ ಕೋವಿಡ್-19 ರ ಪರೀಕ್ಷೆ (Rapid Checkup) ಹೆಚ್ಚು ಮಾಡುವಂತೆ ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು.

- **ವಿದ್ಯುತ್ ವಿಭಾಗದವರಿಗೆ:**
  1. Street Light at Modi Garden and Willioms Town ನಲ್ಲಿ ಸರಿಪಡಿಸಲು ಸೂಚಿಸಲಾಯಿತು.

- **ಕಲ್ಯಾಣ ಇಲಾಖೆ:**
  1. ಒಂಟಿ ಮನೆ ನಿರ್ಮಾಣ ಮಾಡಿರುವ ಫಲಾನುಭವಿಗಳಿಗೆ ಕಂತಿನ ಹಣ ಪಾವತಿ ಮಾಡಲು ಸೂಚಿಸಲಾಯಿತು.

- **ಕಂದಾಯ ಇಲಾಖೆ:**
  1. ಸಂಬಂಧಪಟ್ಟ ವಾರ್ಡ್ ಪ್ರದೇಶಗಳಲ್ಲಿ ಆದಾಯ ತೆರಿಗೆಗಳನ್ನು ವಸೂಲಿ ಮಾಡಲು ಸೂಚಿಸಲಾಯಿತು

- **ಬಿ.ಡಬ್ಲ್ಯೂ.ಎಸ್.ಎಸ್.ಬಿ**
  1. ಗೋವಾ ಗಾರ್ಡನ್ ಹಾಗೂ ಡಿ.ಜೆ ಹಳ್ಳಿ ಒಳಚರಂಡಿ ವ್ಯವಸ್ಥೆಯನ್ನು ಸರಿಪಡಿಸಲು ಸೂಚಿಸಲಾಯಿತು

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ನೋಡಲ್ ಅಧಿಕಾರಿ ರವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಅತೀಫ್ ಅಹಮ್ಮದ್)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 61

**ಪ್ರತಿಯನ್ನು:**

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಜಂಟಿ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಿಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಿಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
07. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಅಭಿಯಂತರರು ವಿದ್ಯುತ್/ಪುಲಿಕೇಶಿನಗರ ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಕಛೇರಿ ಕಡತಕ್ಕೆ.